ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1665
ಸದಸ್ಯರ ಹೆಸರು : ಶ್ರೀ ಪಿ. ಆರ್. ರಮೇಶ್
ಉತ್ತರಿಸುವ ದಿನಾಂಕ : 20.03.2020
ಉತ್ತರಿಸುವ ಸಚಿವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ವಿಕಲಚೇತನರಿಗೆ ಮತ್ತು ಹಿರಿಯ ನಾಗರೀಕರಿಗೆ ಸರ್ಕಾರದಿಂದ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ; (ವಿವರ ನೀಡುವುದು)	ವಿಕಲಚೇತನ ಹಾಗೂ ಹಿರಿಯ ನಾಗರಿಕರಿಗೆ ಸಂಬಂಧಿಸಿದ ಯೋಜನೆಯ ವಿವರವನ್ನು ಅನುಬಂಧ-1ರಲ್ಲಿ ಒದಗಿಸಿದೆ.
ಆ)	ಈ ಯೋಜನೆಗಳನ್ನು ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)	ಇಲಾಖಾ ಯೋಜನೆಗೆ ಸಂಬಂಧಿಸಿದ ಫಲಾನುಭವಿಗಳ ಸಂಖ್ಯೆಯ ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-2ರಲ್ಲಿ ಒದಗಿಸಿದೆ.
ಇ)	ಯೋಜನೆಗಳು ಸಕಾಲದಲ್ಲಿ ಫಲಾನುಭವಿಗಳಿಗೆ ತಲುಪುತ್ತಿದೆಯೇ; ತಲುಪದೇ ಇದ್ದಲ್ಲಿ, ಸರಿಪಡಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ? (ಸಂಪೂರ್ಣ ಮಾಹಿತಿ ನೀಡುವುದು)	ಎಲ್ಲಾ ಯೋಜನೆಗಳು ಸಕಾಲದಲ್ಲಿ ಫಲಾನುಭವಿಗಳಿಗೆ ತಲುಪುತ್ತಿದೆ.

ಸಂಖ್ಯೆ: ಮಮಇ 90 ಪಿಹೆಚ್‌ಪಿ 2020

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ
ಇಲಾಖಾ ಸಚಿವರು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪಿ. ಆರ್. ರಮೇಶ್ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ:1665ಕ್ಕೆ
ಅನುಬಂಧ-1

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು

ಇಲಾಖೆಯ ಕಾರ್ಯಕ್ರಮಗಳನ್ನು 3 ವಿಭಾಗಗಳಲ್ಲಿ ವರ್ಗೀಕರಿಸಲಾಗಿದೆ.

1. ವಿಕಲಚೇತನರಿಗಾಗಿ ಅಭಿವೃದ್ಧಿ ಕಾರ್ಯಕ್ರಮಗಳು.
2. ಹಿರಿಯ ನಾಗರಿಕರಿಗಾಗಿ ಅಭಿವೃದ್ಧಿ ಕಾರ್ಯಕ್ರಮಗಳು.
3. ಸಾಮಾಜಿಕ ಭದ್ರತೆ ಮತ್ತು ರಕ್ಷಣೆ ಕಾರ್ಯಕ್ರಮಗಳು.

ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳು:

(ಎ) ಶೈಕ್ಷಣಿಕ:-

1) ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಶಾಲೆಗಳು:

ಇಲಾಖೆಯಡಿ ಶ್ರವಣದೋಷವುಳ್ಳ ಮಕ್ಕಳಿಗಾಗಿ ಬೆಂಗಳೂರು ನಗರ, ಮೈಸೂರು, ಕಲಬುರ್ಗಿ, ಬಳ್ಳಾರಿ, ಬೆಳಗಾವಿ ಜಿಲ್ಲೆಗಳಲ್ಲಿ 5 ಕಿವುಡು ಮಕ್ಕಳ ವಸತಿ ಶಾಲೆಗಳನ್ನು ನಡೆಸಲಾಗುತ್ತಿದೆ. ಈ ಶಾಲೆಗಳಲ್ಲಿ ಮಕ್ಕಳಿಗೆ ಉಚಿತ ವಸತಿ, ಊಟ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ. ಈ ಪೈಕಿ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಬೆಳಗಾವಿಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

2. ಅಂಧ ಮಕ್ಕಳಿಗಾಗಿ ವಸತಿಯುತ ಶಾಲೆಗಳು:

ಇಲಾಖೆಯಡಿ 4 ಅಂಧ ಮಕ್ಕಳ ವಸತಿ ಶಾಲೆಗಳು ಕಲಬುರ್ಗಿ, ಮೈಸೂರು, ದಾವಣಗೆರೆ ಹಾಗೂ ಹುಬ್ಬಳ್ಳಿಯಲ್ಲಿ ನಡೆಸಲಾಗುತ್ತಿದೆ. ಈ ಶಾಲೆಗಳಲ್ಲಿ ದೃಷ್ಟಿದೋಷವುಳ್ಳ ಮಕ್ಕಳಿಗೆ ಉಚಿತ ಊಟ, ವಸತಿ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ. ಈ ಪೈಕಿ ದೃಷ್ಟಿದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ದಾವಣಗೆರೆಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

3. ಸರ್ಕಾರಿ ಅನುದಾನಿತ ಶಾಲೆಗಳು

(ಅ) 1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 34 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ. ರಾಜ್ಯ ಸರ್ಕಾರದಿಂದ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ.

(ಆ)ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ: ಈ ಯೋಜನೆಯಡಿ ಬುದ್ಧಿಮಾಂದ್ಯ (ಸೆರಬ್ರಲ್ ಪಾಲ್ಸಿ, ಆಟಿಸಂ), ದೃಷ್ಟಿದೋಷ, ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಹಾಗೂ ವಸತಿರಹಿತ ಶಾಲೆಗಳು ಸೇರಿದಂತೆ ಒಟ್ಟು 133 ವಿಶೇಷ ಶಾಲೆಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶ್ರವಣದೋಷವುಳ್ಳ ಹಾಗೂ ದೃಷ್ಟಿದೋಷವುಳ್ಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6200/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.5200/- ರಂತೆ ಹಾಗೂ ಬುದ್ದಿಮಾಂದ್ಯ ಮಕ್ಕಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6800/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ. 6000/- ರಂತೆ ವರ್ಷದಲ್ಲಿ 10 ತಿಂಗಳ ಅವಧಿಗೆ ಅನುದಾನವನ್ನು ಮಂಜೂರು ಮಾಡಲಾಗುತ್ತಿದೆ. ಈ ಅನುದಾನದಲ್ಲಿ ಶಿಕ್ಷಕರ ಗೌರವಧನ, ಮಕ್ಕಳ ಆಹಾರ ವೆಚ್ಚ, ಕಟ್ಟಡದ ಬಾಡಿಗೆ ಹಾಗೂ ನಿರ್ವಹಣಾ ವೆಚ್ಚ, ಸಮವಸ್ತ್ರ, ವೈದ್ಯಕೀಯ ವೆಚ್ಚ ಹಾಗೂ ಸಾದಿಲ್ವಾರು ವೆಚ್ಚಗಳು ಒಳಗೊಂಡಿರುತ್ತವೆ.

...2

(ಇ) ಕೇಂದ್ರ ಸರ್ಕಾರದ ದೀನ್‌ದಯಾಳ್ ಪುನರ್ವಸತಿ ಯೋಜನೆಯಡಿ 8 ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಿಶೇಷ ಶಾಲೆ /ವೃತ್ತಿ ತರಬೇತಿ ಕೇಂದ್ರಗಳು ನಡೆಯುತ್ತಿದ್ದು, ಸದರಿ ಶಾಲೆ ಹಾಗೂ ತರಬೇತಿ ಕೇಂದ್ರಗಳಿಗೆ ಕೇಂದ್ರ ಸರ್ಕಾರದಿಂದ ಶೇ.90ರಷ್ಟು ಅನುದಾನವನ್ನು ಮಂಜೂರು ಮಾಡಲಾಗುತ್ತಿದ್ದು, ಉಳಿದ ಶೇ.10ರಷ್ಟು ವೆಚ್ಚವನ್ನು ಸಂಸ್ಥೆಯವರು ಭರಿಸಬೇಕಾಗಿರುತ್ತದೆ.

4. ಅಂಗವಿಕಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹನ ಧನ:

ಈ ಯೋಜನೆಯಡಿ ಒಂದನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಆಯಾ ಜಿಲ್ಲಾ ಕಛೇರಿಗಳ ಮೂಲಕ ಮಂಜೂರು ಮಾಡಲಾಗುತ್ತಿದೆ. 2001-02ನೇ ಸಾಲಿನಿಂದ ಈ ಯೋಜನೆಯ ಫಲಾನುಭವಿಗಳಿಗೆ ಆದಾಯ ಮಿತಿಯಿಂದ ವಿನಾಯಿತಿಗೊಳಿಸಲಾಗಿದೆ.

5. ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಯೋಜನೆ:

ಸಾರ್ವತ್ರಿಕ ಪರೀಕ್ಷೆಗಳಲ್ಲಿ ಶೇಕಡ 60 ಕ್ಕಿಂತಲೂ ಹೆಚ್ಚಿನ ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಯೋಜನೆ ಇದಾಗಿದೆ. ಈ ಯೋಜನೆಯನ್ನು 2001-02ನೇ ಸಾಲಿನಿಂದ ಬಿ.ಎಡ್, ಎಂ.ಎಡ್. ಮತ್ತು ಟಿ.ಸಿ.ಹೆಚ್. ವಿದ್ಯಾರ್ಥಿಗಳಿಗೂ ವಿಸ್ತರಿಸಲಾಗಿದೆ.

6. ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ:

ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯನ್ನು 2013-14ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯಮಿತಿ ಇರುವುದಿಲ್ಲ. ವೈದ್ಯಕೀಯ ಮಂಡಳಿಯವರು ಶಿಫಾರಸ್ಸು ಮಾಡಿರುವ ವಿಕಲಚೇತನ ಅಭ್ಯರ್ಥಿಗಳು ಮಾತ್ರ ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ.

7. ಬ್ರೈಲ್ ಮುದ್ರಣಾಲಯ:

ದೃಷ್ಟಿದೋಷವುಳ್ಳ ಮಕ್ಕಳಿಗೆ ಬೇಕಾಗುವ ಬ್ರೈಲ್ ಪುಸ್ತಕಗಳನ್ನು ಮುದ್ರಿಸಿ ಸಂಬಂಧಪಟ್ಟ ಅಂಧರ ಶಾಲೆಗಳಿಗೆ ಮೈಸೂರಿನಲ್ಲಿರುವ ಬ್ರೈಲ್ ಮುದ್ರಣಾಲಯದ ಮೂಲಕ ಉಚಿತವಾಗಿ ಸರಬರಾಜು ಮಾಡಲಾಗುತ್ತಿದೆ.

8. ವಿಶೇಷ ಶಿಕ್ಷಣ ತರಬೇತಿ ಕೇಂದ್ರ ಯೋಜನೆ:

ದೃಷ್ಟಿದೋಷವುಳ್ಳ ಹಾಗೂ ಶ್ರವಣದೋಷವುಳ್ಳ ವಿದ್ಯಾರ್ಥಿಗಳಿಗೆ ಬೋಧಿಸುವ ಶಿಕ್ಷಕರಿಗೆ ವಿಶೇಷ ಶಿಕ್ಷಣ ನೀಡಲು ತಲಾ ಒಂದರಂತೆ ವಿಶೇಷ ಶಿಕ್ಷಕರ ತರಬೇತಿ ಕೇಂದ್ರವನ್ನು ಮೈಸೂರಿನಲ್ಲಿ ನಡೆಸುತ್ತಿದ್ದು, ಪ್ರತಿ ವರ್ಷ ಪ್ರತಿ ಕೇಂದ್ರದಲ್ಲಿ 25 ಪ್ರಶಿಕ್ಷಣಾರ್ಥಿಗಳು ತರಬೇತಿ ಪಡೆಯುತ್ತಿದ್ದಾರೆ.

9. ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು:

ಸೆರಬ್ರಲ್ ಪಾಲ್ಸಿ, ಆಟಿಸಂ, ಮಾನಸಿಕ ಅಸ್ವಸ್ಥ ಹಾಗೂ ತೀವ್ರತರದ ಅಂಗವೈಕಲ್ಯತೆ ಹೊಂದಿರುವ ಮೂರರಿಂದ 25 ವರ್ಷದ ಒಳಗಿನ ಮಕ್ಕಳಿಗಾಗಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿದ್ದು, ಪ್ರತಿ ಕೇಂದ್ರದಲ್ಲಿ 25 ಮಕ್ಕಳನ್ನು ದಾಖಲಿಸಲು ಅವಕಾಶವಿದ್ದು, ಪ್ರತಿ ಮಗುವಿಗೆ ಮಾಸಿಕ ರೂ. 10,000/-ಗಳಂತೆ ವಾರ್ಷಿಕ 25.00 ಲಕ್ಷಗಳನ್ನು ಮಂಜೂರು ಮಾಡಲಾಗುತ್ತಿದೆ. ಪ್ರತಿ ವಿಭಾಗವಾರು ಹಗಲು ಯೋಗಕ್ಷೇಮ ಕೇಂದ್ರಗಳನ್ನು ಪ್ರಾರಂಭಿಸಲು ಕ್ರಮಕೈಗೊಳ್ಳಲಾಗುತ್ತಿದೆ.

...3

(ಬಿ) ಉದ್ಯೋಗ ಮತ್ತು ತರಬೇತಿ:

1. ವಿಕಲಚೇತನರಿಗೆ ವೃತ್ತಿ ತರಬೇತಿ ಕೇಂದ್ರಗಳು:

ಈ ಯೋಜನೆಯ ಉದ್ದೇಶವು ವಿವಿಧ ರೀತಿಯ ವಿಕಲಚೇತನರಿಗೆ ವೃತ್ತಿ ತರಬೇತಿಯನ್ನು ನೀಡುವುದಾಗಿದೆ. 1982ರ ರಾಜ್ಯ ಅನುದಾನ ಸಂಹಿತೆಯಡಿ 5 ವೃತ್ತಿ ತರಬೇತಿ ಕೇಂದ್ರಗಳನ್ನು ರಾಜ್ಯ ಸಹಾಯಾನುದಾನದಡಿ ಬೆಂಗಳೂರು ಮತ್ತು ಮೈಸೂರಿನಲ್ಲಿ ನಡೆಸಲಾಗುತ್ತಿದೆ. ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಂದು ವಾಕ್‌ಶ್ರವಣ ಕೇಂದ್ರವನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ. ವೃತ್ತಿ ತರಬೇತಿ ಕೇಂದ್ರಗಳಲ್ಲಿ ವಿವಿಧ ರೀತಿಯ ವಿಕಲಚೇತನರಿಗೆ ಫಿಟ್ಟರ್, ಟರ್ನರ್, ಸರಳ ಇಂಜಿನಿಯರಿಂಗ್, ಬೆತ್ತ, ಹಗ್ಗ, ಚಾಪೆ ಹೆಣೆಯುವುದು ಹಾಗೂ ಪ್ಲಾಸ್ಟಿಕ್ ಮೌಲ್ಡಿಂಗ್ ತರಬೇತಿಯನ್ನು ನೀಡಲಾಗುತ್ತಿದೆ. ಪ್ರತಿ ತರಬೇತಿ ಕೇಂದ್ರದಲ್ಲಿ ವಾರ್ಷಿಕ 25 ಫಲಾನುಭವಿಗಳು ತರಬೇತಿ ಪಡೆಯುತ್ತಿದ್ದಾರೆ.

2. ಅಂಗವಿಕಲ ಪುರುಷ ಹಾಗೂ ಮಹಿಳೆಯರ ವಸತಿನಿಲಯ:

ಬೆಂಗಳೂರಿನಲ್ಲಿ ಮಹಿಳಾ ಮತ್ತು ಪುರುಷ ಅಂಗವಿಕಲ ನೌಕರರು ಮತ್ತು ಪ್ರಶಿಕ್ಷಣಾರ್ಥಿಗಳಿಗೆ ಪ್ರತ್ಯೇಕವಾದ ಒಂದೊಂದು ವಸತಿ ನಿಲಯವನ್ನು ನಡೆಸಲಾಗುತ್ತಿದೆ. ಪುರುಷರ ವಸತಿ ನಿಲಯದಲ್ಲಿ 50 ನಿವಾಸಿಗಳು ಹಾಗೂ ಮಹಿಳೆಯರ ವಸತಿ ನಿಲಯದಲ್ಲಿ 50 ನಿವಾಸಿಗಳನ್ನು ದಾಖಲಿಸಲು ಅವಕಾಶವಿದೆ.

3. ಆಧಾರ ಯೋಜನೆ :

ವಿಕಲಚೇತನರು ಸ್ವಯಂ ಉದ್ಯೋಗ ಕೈಗೊಂಡು ಜೀವನ ಸಾಗಿಸಲು ಅನುಕೂಲವಾಗುವಂತೆ ಆಧಾರ ಎಂಬ ಸಾಲ ಯೋಜನೆಯನ್ನು ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ನೇತೃತ್ವದಲ್ಲಿ ಜಾರಿಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಪ್ರತಿ ಫಲಾನುಭವಿಗೆ ರೂ.15,000/-ಗಳ ಮೌಲ್ಯದ ಕಬ್ಬಿಣದ ಗೂಡಂಗಡಿಯನ್ನು ಉಚಿತವಾಗಿ ಹಾಗೂ ರೂ.20,000/-ಗಳ ನಿರ್ವಹಣಾ ಬಂಡವಾಳವನ್ನು ಬಡ್ಡಿ ರಹಿತ ಸಾಲದ ರೂಪದಲ್ಲಿ ನೀಡಲಾಗುತ್ತಿದೆ. 2018-19ನೇ ಸಾಲಿನ ಆಯವ್ಯಯ ಭಾಷಣದಲ್ಲಿ 'ಆಧಾರ' ಸ್ವಯಂ ಉದ್ಯೋಗ ಯೋಜನೆಯ ಘಟಕ ವೆಚ್ಚವನ್ನು ಈಗಿರುವ ರೂ.0.35ಲಕ್ಷಗಳಿಂದ ರೂ.1.00 ಲಕ್ಷ ರೂ.ಗಳಿಗೆ ಹೆಚ್ಚಿಸಿ, ಇದರಲ್ಲಿ ಶೇ.50ರಷ್ಟು ಬ್ಯಾಂಕ್ ಸಾಲ ಮತ್ತು ಶೇ.50ರಷ್ಟು ಸಹಾಯಧನ ಒದಗಿಸಲಾಗಿದೆ.

4. ಗ್ರಾಮೀಣ ಪುನರ್ವಸತಿ ಯೋಜನೆ:

ಈ ಯೋಜನೆಯನ್ನು ರಾಜ್ಯದ ಎಲ್ಲಾ 30 ಜಿಲ್ಲೆಗಳ 176 ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಪ್ರತಿ ಗ್ರಾಮ ಪಂಚಾಯತಿ ಅಡಿಯಲ್ಲಿ ಎಸ್.ಎಸ್.ಎಲ್.ಸಿ. ಉತ್ತೀರ್ಣ/ ಅನುತ್ತೀರ್ಣರಾದ ಸಮರ್ಥ ವಿಕಲಚೇತನರನ್ನು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರೆಂದು ಹಾಗೂ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಸ್ಥಳೀಯ ಸಮರ್ಥ ಪದವೀಧರ ವಿಕಲಚೇತನರೊಬ್ಬರನ್ನು ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರೆಂದು, ಸ್ಥಳೀಯ ನಗರ ಪ್ರದೇಶಗಳಲ್ಲಿ ನಗರ ಪುನರ್ವಸತಿ ಕಾರ್ಯಕರ್ತರೆಂದು ಮತ್ತು ನಿರ್ದೇಶನಾಲಯದಲ್ಲಿ ರಾಜ್ಯ ಸಂಯೋಜಕರನ್ನು ಗೌರವಧನ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ. ಈ ಕಾರ್ಯಕರ್ತರ ಮೂಲಕ ವಿಕಲಚೇತನರಿಗೆ ಎಲ್ಲಾ ಸೇವಾ ಸೌಲಭ್ಯಗಳನ್ನು ಅವರಿರುವ ಸ್ಥಳಗಳಲ್ಲಿಯೇ ವಿಕಲಚೇತನರ ಮೂಲಕವೇ ತಲುಪಿಸಲಾಗುವುದು.

ಸರ್ಕಾರದ ಆದೇಶ ಸಂಖ್ಯೆ: ಮಮಇ/241/ಪಿಹೆಚ್‌ಪಿ/2019, ದಿನಾಂಕ: 07-02-2020ರಂತೆ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ನಗರ ಪುನರ್ವಸತಿ ಕಾರ್ಯಕರ್ತರುಗಳ ಗೌರವಧನವನ್ನು ರೂ.3000/-ಗಳಿಂದ ರೂ.6000/-ಗಳಿಗೆ ಹಾಗೂ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರ ಗೌರವಧನವನ್ನು ರೂ.6000/-ಗಳಿಂದ ರೂ.12,000/-ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ.

...4

5. ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ವಸತಿ ನಿಲಯಗಳು:

ಅಂಗವಿಕಲ ಉದ್ಯೋಗಸ್ಥ ಮಹಿಳೆಯರಿಗಾಗಿ ಹಾಗೂ ವಿದ್ಯಾರ್ಥಿನಿ/ತರಬೇತಾರ್ಥಿಗಳಿಗೆ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಜಿಲ್ಲಾ ಕೇಂದ್ರಗಳಲ್ಲಿ 26 ಮಹಿಳಾ ವಸತಿ ನಿಲಯಗಳನ್ನು ನಡೆಸುತ್ತಿದ್ದು, ಸದರಿ ವಸತಿ ನಿಲಯದಲ್ಲಿ ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ಹಾಗೂ ವಿದ್ಯಾರ್ಥಿನಿಯರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಲಾಗಿದೆ. ಈ ವಸತಿ ನಿಲಯದಲ್ಲಿ ವಿದ್ಯಾರ್ಥಿನಿಯರು ಹಾಗೂ ತರಬೇತಿದಾರರಿಗೆ ಉಚಿತ ಊಟದ ವ್ಯವಸ್ಥೆಯಿದ್ದು, ಉದ್ಯೋಗಸ್ಥ ಮಹಿಳೆಯರು ಮಾಸಿಕ 800/-ಗಳನ್ನು ಪಾವತಿಸಬೇಕಾಗಿರುತ್ತದೆ.

ಸಿ. ಸಾಮಾಜಿಕ ಭದ್ರತಾ ಯೋಜನೆಗಳು:

1. ಸಮಾಜ ಸೇವಾ ಸಂಕೀರ್ಣ:

ನಿರ್ಗತಿಕ ಬುದ್ಧಿಮಾಂದ್ಯ ಪುರುಷರಿಗಾಗಿ ಸಮಾಜ ಸೇವಾ ಸಂಕೀರ್ಣ ಸಂಸ್ಥೆಯು ಬೆಂಗಳೂರಿನಲ್ಲಿ ಸರ್ಕಾರದ ವತಿಯಿಂದ ನಡೆಯುತ್ತಿದ್ದು, ಈ ಸಂಸ್ಥೆಯಲ್ಲಿ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ, ಸಂರಕ್ಷಣೆ ಒದಗಿಸಲಾಗುತ್ತಿದೆ.

2. ಮಂದಮತಿ ಮಹಿಳೆಯರ ಅನುಪಾಲನಾ ಗೃಹ:

18 ವರ್ಷ ಮೇಲ್ಪಟ್ಟ ನಿರ್ಗತಿಕ ಮಹಿಳಾ ಬುದ್ಧಿಮಾಂದ್ಯರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ ಮತ್ತು ಸಂರಕ್ಷಣೆ ಒದಗಿಸುವ ಉದ್ದೇಶದಿಂದ ಮಂದಮತಿ ಮಹಿಳೆಯರ ಅನುಪಾಲನಾ ಗೃಹಗಳನ್ನು ಬೆಂಗಳೂರು ನಗರ ಹಾಗೂ ಹುಬ್ಬಳ್ಳಿಯಲ್ಲಿ ಇಲಾಖಾವತಿಯಿಂದ ನಡೆಸಲಾಗುತ್ತಿದೆ.

3. ಮಾನಸಿಕ ಅಸ್ವಸ್ಥರಿಗೆ ಮಾನಸ ಕೇಂದ್ರಗಳು:

ಮಾನಸಿಕ ಅಸ್ವಸ್ಥರಿಗಾಗಿ ಬೆಂಗಳೂರು, ಬೆಳಗಾವಿ, ರಾಯಚೂರು, ಬಳ್ಳಾರಿ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಮಾನಸ ಕೇಂದ್ರಗಳನ್ನು ಪ್ರಾರಂಭಿಸಲು ಸರ್ಕಾರ ಮಂಜೂರಾತಿಯನ್ನು ನೀಡಿರುತ್ತದೆ. ರಾಜ್ಯ ಉಚ್ಚ ನ್ಯಾಯಾಲಯ ಮತ್ತು ಅಧೀನ ನ್ಯಾಯಾಲಯಗಳಿಂದ ಆದೇಶಿಸಲ್ಪಡುವ ಮಾನಸಿಕ ಅಸ್ವಸ್ಥರನ್ನು ಹಾಗೂ ರಸ್ತೆಗಳಲ್ಲಿ ಓಡಾಡುವ ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಈ ಕೇಂದ್ರಗಳಲ್ಲಿ ನಿರ್ದಿಷ್ಟ ವೈದ್ಯಕೀಯ ಪ್ರಾಧಿಕಾರದ ಆದೇಶದ ಮೇರೆಗೆ ದಾಖಲಿಸಲು ಅವಕಾಶವಿರುತ್ತದೆ. ಈ ಕೇಂದ್ರಗಳಲ್ಲಿ ಫಲಾನುಭವಿಗಳಿಗೆ ಉಚಿತ ಊಟ, ವಸತಿ, ವೈದ್ಯಕೀಯ ಶುಶ್ರೂಷೆ, ವೈದ್ಯಕೀಯ ಸಲಹೆ(ಕೌನ್ಸಲಿಂಗ್) ಸೌಲಭ್ಯವನ್ನು ನೀಡಲಾಗುತ್ತಿದ್ದು, ಇವು ಅಲ್ಪಾವಧಿ ಕೇಂದ್ರಗಳಾಗಿರುತ್ತವೆ. ಪ್ರಸ್ತುತ ಬೆಂಗಳೂರು ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ಮಾತ್ರ ಮಾನಸ ಕೇಂದ್ರಗಳು ನಡೆಯುತ್ತಿವೆ.

4. ಬುದ್ಧಿಮಾಂದ್ಯ ಮಕ್ಕಳ ಪೋಷಕರಿಗೆ ವಿಮಾ ಯೋಜನೆ:

ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ: ತಾಯಿ: ಪೋಷಕರ ವಿಮಾ ಯೋಜನೆಯನ್ನು ಭಾರತೀಯ ಜೀವ ವಿಮಾ ನಿಗಮದ ಮೂಲಕ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ:ತಾಯಿ: ಪೋಷಕರು ಮರಣ ಹೊಂದಿದ ನಂತರ ಬುದ್ಧಿಮಾಂದ್ಯ ಮಕ್ಕಳ ಜೀವನ ನಿರ್ವಹಣೆಗಾಗಿ ರೂ.20,000/-ಗಳ ಪರಿಹಾರ ಧನವನ್ನು ಕುಟುಂಬದ ನಾಮ ನಿರ್ದೇಶಿತ ಸದಸ್ಯರಿಗೆ ಪಾವತಿಸಲಾಗುತ್ತಿದೆ.

5. ವಿಕಲಚೇತನ ವ್ಯಕ್ತಿಗಳನ್ನು ಸಾಮಾನ್ಯರು ಮದುವೆಯಾದಲ್ಲಿ ಪ್ರೋತ್ಸಾಹ ಧನ ನೀಡುವ ಯೋಜನೆ:

ವಿಕಲಚೇತನ ಯುವಕ/ಯುವತಿಯರನ್ನು ವಿವಾಹವಾಗುವ ಸಾಮಾನ್ಯ ಯುವಕ/ ಯುವತಿಯರಿಗೆ ನಿರಂತರವಾಗಿ ಮಾಸಿಕ ಆದಾಯ ದೊರಕಿಸಲು ವಿಕಲಚೇತನ ವ್ಯಕ್ತಿಯ ಹೆಸರಿನಲ್ಲಿ ರೂ.50,000/-ಗಳನ್ನು ಮದುವೆಯಾದ ಸಾಮಾನ್ಯ ವ್ಯಕ್ತಿ ಹಾಗೂ ವಿಕಲಚೇತನರ ಜಂಟಿ ಹೆಸರಿನಲ್ಲಿ 05 ವರ್ಷದ ಅವಧಿಗೆ ಹೂಡಿಕೆಯ ರೂಪದಲ್ಲಿ ನೀಡಿ ಪ್ರೋತ್ಸಾಹ ನೀಡಲು ಹಾಗೂ ಅದರಿಂದ ಬರುವ ಬಡ್ಡಿ ಹಣವನ್ನು ಉಪಯೋಗಿಸುವುದು ಹಾಗೂ 05 ವರ್ಷಗಳ ನಂತರ ಠೇವಣಿ ಮೊತ್ತವನ್ನು ವಾಪಸ್ಸು ಪಡೆಯಬಹುದು ಅಥವಾ ಮುಂದುವರೆಸಲು ಅವಕಾಶವಿರುತ್ತದೆ.

6. ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಭತ್ಯೆ ಒದಗಿಸುವ ಯೋಜನೆ :

ಅಂಧ ಮಹಿಳೆಯರು ಮಗುವಿಗೆ ಜನ್ಮ ನೀಡಿದಾಗ ಆ ಮಗುವನ್ನು ಇತರೆ ಸಾಮಾನ್ಯ ತಾಯಂದಿರಂತೆ ಆರೈಕೆ ಮಾಡುವುದು ಕಷ್ಟಕರವಾಗಿರುತ್ತದೆ. ಇಂತಹ ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಮಾಡಲು ಆಯಾ ಸೇವೆ, ಆರೋಗ್ಯ ಪಾಲನೆ, ಪೌಷ್ಠಿಕ ಆಹಾರ, ಔಷಧೋಪಚಾರಗಳಿಗೆ ಮಾಹೆಯಾನ ರೂ.2000/- ದಂತೆ 2 ವರ್ಷಗಳ ಅವಧಿಗೆ ಸಹಾಯಧನವನ್ನು ನೀಡಲಾಗುತ್ತಿದೆ. ಈ ಸೌಲಭ್ಯವನ್ನು ಕನಿಷ್ಠ 2 ಮಕ್ಕಳವರೆಗೆ ಪಡೆಯಬಹುದಾಗಿದೆ.

(ಡಿ) ಪುನರ್ವಸತಿ ಯೋಜನೆಗಳು:

1. ಅಂಗವಿಕಲರಿಗೆ ಸಾಧನ ಸಲಕರಣೆಗಳು :

ಈ ಯೋಜನೆಯಡಿಯಲ್ಲಿ ಅಂಗವಿಕಲರಿಗೆ ಅವಶ್ಯವಾಗಿರುವ ಸಾಧನ ಸಲಕರಣೆಗಳನ್ನು ನೀಡಲಾಗುತ್ತಿದೆ. ಫಲಾನುಭವಿಯ ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ಗ್ರಾಮೀಣ ಪ್ರದೇಶದ ಫಲಾನುಭವಿಗಳಿಗೆ ರೂ.11,500/- ಮತ್ತು ನಗರ ಪ್ರದೇಶದ ಫಲಾನುಭವಿಗಳಿಗೆ ರೂ.24,000/- ನಿಗದಿಗೊಳಿಸಲಾಗಿದೆ.

ಅ. ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ :

ಎಸ್.ಎಸ್.ಎಲ್.ಸಿ ನಂತರ ವ್ಯಾಸಂಗ ಮಾಡುವ ದೃಷ್ಠಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಪಡೆಯಲು ಅನುಕೂಲವಾಗುವಂತೆ ಮಾತನಾಡುವ (ಟಾಕಿಂಗ್) ಲ್ಯಾಪ್‌ಟಾಪ್‌ಗಳನ್ನು ಅರ್ಹ ಫಲಾನುಭವಿಗಳಿಗೆ ನೀಡಲಾಗುತ್ತಿದೆ.

ಆ. ತೀವ್ರತೆರೆನಾದ ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ :

20 ರಿಂದ 60 ವರ್ಷದ ವಯೋಮಾನದ ತೀವ್ರತರವಾದ ದೈಹಿಕ ವಿಕಲಚೇತನರ ಕುಟುಂಬದ ವಾರ್ಷಿಕ ವರಮಾನ ರೂ.2.00 ಲಕ್ಷಗಳಿಗಿಂತ ಕಡಿಮೆ ಇರುವ ವಿಕಲಚೇತನರಿಗೆ ಅನುಕೂಲವಾಗುವಂತೆ ಜೀವಿತ ಕಾಲದಲ್ಲಿ ಒಂದು ಬಾರಿ ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ಒದಗಿಸಲಾಗುತ್ತಿದೆ.

2. ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ ಯೋಜನೆ:-

ವಿಕಲಚೇತನರನ್ನು ಗುರುತಿಸಿ ಅವರಿಗೆ ಶೈಕ್ಷಣಿಕ, ಉದ್ಯೋಗ ಮತ್ತು ತರಬೇತಿ, ಸಾಮಾಜಿಕ ಭದ್ರತೆ ಹಾಗೂ ಪುನರ್ವಸತಿ ಸೇವೆಗಳನ್ನು ಅವರ ಮನೆ ಬಾಗಿಲಿನಲ್ಲಿಯೇ ಒದಗಿಸಿ ಅವರ ಸರ್ವಾಂಗೀಣ ಪುನರ್ವಸತಿಯನ್ನು ಕಲ್ಪಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ. ಈ ಯೋಜನೆಯಡಿ ವಿಕಲಚೇತನರಿಗೆ ಅಗತ್ಯವಿರುವ ವೈದ್ಯಕೀಯ ಸೇವೆ, ವೃತ್ತಿ ಚಿಕಿತ್ಸೆ, ವಿವಿಧ ರೀತಿಯ ಸಾಧನ ಸಲಕರಣೆಗಳನ್ನು ಕೇಂದ್ರಗಳಲ್ಲಿ ತಯಾರಿಸಿ ಒದಗಿಸಲಾಗುವುದು.

3. ಅಂಗವಿಕಲತೆಯನ್ನು ನಿವಾರಿಸುವ ಶಸ್ತ್ರಚಿಕಿತ್ಸೆಗಾಗಿ ವೈದ್ಯಕೀಯ ಪರಿಹಾರ ನಿಧಿ ಯೋಜನೆ:-

ಅಂಗವಿಕಲ ವ್ಯಕ್ತಿಗಳಿಗೆ ಅಂಗವಿಕಲತೆಯನ್ನು ನಿವಾರಿಸಲು ಶಸ್ತ್ರ ಚಿಕಿತ್ಸೆಗಾಗಿ ಸರ್ಕಾರಿ ಆಸ್ಪತ್ರೆ, ಸಂಜಯಗಾಂಧಿ ಆಸ್ಪತ್ರೆಗಳಲ್ಲಿ ಹಾಗೂ ಸುಸಜ್ಜಿತ ಖಾಸಗಿ ಆಸ್ಪತ್ರೆಗಳಲ್ಲಿ ಅಂಗವಿಕಲತೆ ನಿವಾರಣಾ ಶಸ್ತ್ರ ಚಿಕಿತ್ಸೆಗಾಗಿ ರೂ.1.00 ಲಕ್ಷಗಳವರೆಗೆ ಸಹಾಯ ಧನವನ್ನು ಮಂಜೂರು ಮಾಡಲಾಗುತ್ತಿದೆ.

4. ಸಾಧನೆ ಮತ್ತು ಪ್ರತಿಭೆ ಯೋಜನೆ:

ವಿಕಲಚೇತನ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡಲು "ಸಾಧನೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ಕ್ರೀಡೆಗಳಲ್ಲಿ ವಿಶೇಷ ಸಾಧನೆಗೈದ ವಿಕಲಚೇತನರಿಗೆ ರೂ.50,000/-ಗಳ ಧನ ಸಹಾಯವನ್ನು ನೀಡಲಾಗುತ್ತಿದೆ.

ವಿಕಲಚೇತನರು ನೀಡುವ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡುವ ಸಲುವಾಗಿ "ಪ್ರತಿಭೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ವೈಯಕ್ತಿಕ ಸಾಂಸ್ಕೃತಿಕ ರೂ.2,000/–ಗಳು ಹಾಗೂ ಸಮೂಹ ಕಾರ್ಯಕ್ರಮಕ್ಕೆ ರೂ.10,000/–ಗಳ ಪ್ರೋತ್ಸಾಹಧನ ನೀಡಲಾಗುತ್ತದೆ.

5. ನಿರಾಮಯ ಆರೋಗ್ಯ ವಿಮಾ ಯೋಜನೆ :

ಬುದ್ಧಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆಗೆ ಒಳಗಾದ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ ವಿಕಲಚೇತನರಿಗೆ ನಿರಾಮಯ ಎಂಬ ಆರೋಗ್ಯ ವಿಮಾ ಯೋಜನೆಯು ಜಾರಿಯಲ್ಲಿದ್ದು, ಮೇಲೆ ವಿವರಿಸಿದ ಅಂಗವಿಕಲತೆ ಹೊಂದಿರುವ ಪ್ರತಿ ವ್ಯಕ್ತಿಗೆ ವರ್ಷಕ್ಕೆ ಒಂದು ಸಾರಿಗೆ ಪ್ರೀಮಿಯಂ ಮೊತ್ತ ರೂ.250/–ಗಳನ್ನು ಅಧಿಕೃತ ಸಂಸ್ಥೆಗೆ ಪಾವತಿಸಲಾಗುವುದು. ಪ್ರತಿ ವರ್ಷ ಯೋಜನೆಯಡಿ ಬರುವ ಫಲಾನುಭವಿಗಳು ರೂ.1.00 ಲಕ್ಷಗಳವರೆಗೆ ವೈದ್ಯಕೀಯ ಸೌಲಭ್ಯ ಪಡೆಯಬಹುದಾಗಿರುತ್ತದೆ.

6. ಅರಿವಿನ ಸಿಂಚನ:

ವಿಕಲಚೇತನರಿಗೆ ಸೂಕ್ತ ಸಾಧನ ಸಲಕರಣೆ, ಅಡೆತಡೆ ರಹಿತ ವಾತಾವರಣ, ವಿಶೇಷ ಶಿಕ್ಷಣ, ಅವಶ್ಯಕ ಥೆರಪಿ ಚಿಕಿತ್ಸೆ, ಸೂಕ್ತ ಸಲಹೆ ಮತ್ತು ಮಾರ್ಗದರ್ಶನ ನೀಡುವುದರಿಂದ ಸಮಾಜದ ಮುಖ್ಯವಾಹಿನಿಗೆ ತರಬಹುದಾಗಿರುತ್ತದೆ. ವಿಕಲಚೇತನರ ತಂದೆ–ತಾಯಿ, ಪೋಷಕರಿಗೆ ಅವರ ಕರ್ತವ್ಯ/ಜವಾಬ್ದಾರಿಗಳ ಬಗ್ಗೆ ಅರಿವು ಮೂಡಿಸುವುದು ಈ ಯೋಜನೆಯ ಉದ್ದೇಶವಾಗಿದೆ.

7. ಸ್ಪರ್ಧಾ ಚೇತನ:–

ಈ ಯೋಜನೆಯಡಿ ವಿಶೇಷ ಸಾಮರ್ಥ್ಯ/ಭಿನ್ನ ಸಾಮರ್ಥ್ಯದ ವಿದ್ಯಾವಂತ ವ್ಯಕ್ತಿಗೆಗಳಿಗೆ ಐ.ಎ.ಎಸ್./ಕೆ.ಎ.ಎಸ್. ಹಾಗೂ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸರ್ಕಾರದ ಇತರೆ ಇಲಾಖೆಗಳಡಿ ಗುರುತಿಸಲ್ಪಟ್ಟ ಪೂರ್ವ ಪರೀಕ್ಷಾ ತರಬೇತಿ ಕೇಂದ್ರಗಳು ಹಾಗೂ ಈ ಇಲಾಖೆಯಿಂದ ಗುರುತಿಸಲ್ಪಟ್ಟ ತರಬೇತಿ ಕೇಂದ್ರಗಳ ಮೂಲಕ ತರಬೇತಿಯನ್ನು ಉಚಿತವಾಗಿ ನೀಡಲಾಗುತ್ತಿದೆ.

8. ನಿರುದ್ಯೋಗ ಭತ್ಯೆ :–

ಎಸ್.ಎಸ್.ಎಲ್.ಸಿ ಹಾಗೂ ನಂತರ ವ್ಯಾಸಂಗ ಮಾಡಿರುವ ನಿರುದ್ಯೋಗಿ ವಿಕಲಚೇತನರಿಗೆ ಮಾಸಿಕ ರೂ.1000/–ಗಳ ನಿರುದ್ಯೋಗ ಭತ್ಯೆಯನ್ನು ಮಂಜೂರು ಮಾಡಲಾಗುತ್ತಿದೆ.

(ಇ) ಸಾರ್ವಜನಿಕ ಅರಿವು ಮೂಡಿಸುವ ಯೋಜನೆಗಳು:

1. ವಿಕಲಚೇತನರ ಮಾಹಿತಿ ಸಲಹಾ ಕೇಂದ್ರ :

ಅಂಗವಿಕಲರಿಗೆ ಲಭ್ಯವಿರುವ ರಾಜ್ಯ ಸರ್ಕಾರದ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳ ಹಾಗೂ ವಿಶೇಷ ಶಾಲೆಗಳು ಹಾಗೂ ವೃತ್ತಿ ತರಬೇತಿ ಸಂಸ್ಥೆಗಳ ಬಗ್ಗೆ ಮಾಹಿತಿಯನ್ನು ಒದಗಿಸಲು ನಿರ್ದೇಶನಾಲಯದಲ್ಲಿ ಹಾಗೂ ರಾಜ್ಯದ 30 ಜಿಲ್ಲೆಗಳಲ್ಲಿ ವಿಕಲಚೇತನರ ಸಹಾಯವಾಣಿ / ಮಾಹಿತಿ ಕೇಂದ್ರಗಳನ್ನು ನಡೆಸಲಾಗುತ್ತಿದೆ. ಈ ಕೇಂದ್ರಗಳಲ್ಲಿ ಒಳ್ಳೆಯ ಗುಣ ಮಟ್ಟದ ಕೃತಕಾಂಗಗಳು ದೊರೆಯುವ ಮಾಹಿತಿ ಹಾಗೂ ಅಂಗವಿಕಲರಿಗೆ ಬೇಕಾಗಿರುವ ಮಾಹಿತಿಗಳನ್ನು ಮತ್ತು ಇದರ ಜೊತೆಗೆ ರಾಜ್ಯ ಸರ್ಕಾರ, ಕೇಂದ್ರ ಸರ್ಕಾರ, ಸಾರ್ವಜನಿಕ ಉದ್ಯಮ ಹಾಗೂ ಖಾಸಗಿ ಉದ್ಯಮಗಳಲ್ಲಿ ಅಂಗವಿಕಲರಿಗೆ ಉದ್ಯೋಗ ಅವಕಾಶಗಳ ಬಗ್ಗೆ ಮಾಹಿತಿಯನ್ನು ನೀಡಲಾಗುವುದು.

...7

2) **ವಿಕಲಚೇತನರಿಗೆ ಗುರುತಿನ ಚೀಟಿ ನೀಡುವ ಯೋಜನೆ:-**

ಈ ಯೋಜನೆಯಡಿಯಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಗುರುತಿನ ಚೀಟಿಗಳನ್ನು ನೀಡಲಾಗುತ್ತಿದೆ. ಈ ಗುರುತಿನ ಚೀಟಿಯನ್ನು ವಿವಿಧ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಉಪಯೋಗಿಸಿಕೊಳ್ಳಬಹುದಾಗಿದೆ. **ವಿಕಲಚೇತನರಿಗೆ ವಿಶಿಷ್ಠ ಗುರುತಿನ ಚೀಟಿ (UNIQUE DISABILITY ID)** ನೀಡುವ ಯೋಜನೆಯು ಕೇಂದ್ರ ಸರ್ಕಾರ ಪ್ರಾಯೋಜಿತ ಯೋಜನೆಯಾಗಿದೆ. ರಾಜ್ಯ ಸರ್ಕಾರದಿಂದ ನೇಮಿಸಲಾಗುವ ವೈದ್ಯಕೀಯ ಪ್ರಾಧಿಕಾರಗಳಿಂದ ದೃಢೀಕರಿಸಲಾಗುವ ವೈದ್ಯಕೀಯ ಪ್ರಮಾಣ ಪತ್ರದ ಸಮಗ್ರ ಮಾಹಿತಿಯುಳ್ಳ ಗಣಕೀಕೃತ ಗುರುತಿನ ಚೀಟಿಯನ್ನು ವಿಕಲಚೇತನ ವ್ಯಕ್ತಿಗಳಿಗೆ ನೀಡುವ ವ್ಯವಸ್ಥೆಯಾಗಿದ್ದು, ಇದರಲ್ಲಿ ವಿಕಲಚೇತನ ವ್ಯಕ್ತಿಯ ವಿವರಗಳು ಹಾಗೂ ಅವರಲ್ಲಿರುವ ವಿಕಲತೆಯ ವಿವರ ಮತ್ತು ಪ್ರಮಾಣವನ್ನು ನಮೂದಿಸಲಾಗಿರುತ್ತದೆ.

3). **ವಿಕಲಚೇತನರಿಗೆ ರಿಯಾಯಿತಿ ದರದ ಬಸ್ ಪಾಸ್:**

ಈ ಯೋಜನೆಯಡಿ ಸರ್ಕಾರವು ಅರ್ಹ ವಿಕಲಚೇತನರಿಗೆ 100 ಕಿ.ಮೀ. ವ್ಯಾಪ್ತಿಯೊಳಗೆ ಸಂಚರಿಸಲು ವಾರ್ಷಿಕ ರೂ.660/-ರ ರಿಯಾಯಿತಿ ದರದಲ್ಲಿ ಬಸ್ ಪಾಸ್‌ಗಳನ್ನು ವಿತರಿಸಲಾಗುತ್ತಿದೆ.

ಹಿರಿಯ ನಾಗರಿಕರಿಗಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಮಾಹಿತಿ

2011ರ ಜನಗಣತಿಯ ಪ್ರಕಾರ ಕರ್ನಾಟಕದಲ್ಲಿನ ಒಟ್ಟು ಜನಸಂಖ್ಯೆಯ ಶೇ 7.72ರಷ್ಟು ಜನ 60 ವರ್ಷ ಮೀರಿದವರಾಗಿರುತ್ತಾರೆ. ಜನ ಸಾಮಾನ್ಯರಿಗೆ ಸರ್ಕಾರವು ಆರೋಗ್ಯ ಪಾಲನೆ ಹಾಗೂ ಇನ್ನಿತರ ಸಂಬಂಧಿತ ಸೌಲಭ್ಯಗಳನ್ನು ವಿಸ್ತರಿಸಿರುವುದರಿಂದ ಜೀವಿತಾವಧಿಯು ಉತ್ತಮಗೊಂಡಿರುತ್ತದೆ. ಈಗಿನ ಸುಧಾರಿತ ಜೀವಿತಾವಧಿಯ ಆರೋಗ್ಯ ಪಾಲನೆ ಮತ್ತು ಸಾಮಾನ್ಯ ಜನತೆಗಾಗಿ ಭಾರತ ಸಂವಿಧಾನದ ಅನುಚ್ಛೇದ 41ರ ಅಡಿಯಲ್ಲಿ ಪ್ರಕಟಪಡಿಸಿದಂತೆ ತನ್ನ ಹಿರಿಯ ನಾಗರಿಕರಿಗೆ ಉತ್ತಮ ಗುಣಮಟ್ಟದ ಜೀವನವನ್ನು ಒದಗಿಸಿ ಕೊಡುವುದನ್ನು ಖಚಿತಪಡಿಸಿಕೊಳ್ಳುವ ಧ್ಯೇಯದಿಂದ ಕರ್ನಾಟಕ ರಾಜ್ಯವು ಹಿರಿಯ ನಾಗರಿಕರಿಗಾಗಿ ಸರ್ಕಾರಿ ಆದೇಶ ಸಂಖ್ಯೆ:ಮಮಇ/314/ಎಸ್.ಜೆ.ಡಿ/2003 ದಿನಾಂಕ:05-09-2003ರನ್ವಯ ಕಾರ್ಯನೀತಿಯನ್ನು ರೂಪಿಸಿದೆ.

ರಾಜ್ಯ ನೀತಿಯ ಉದ್ದೇಶ:

- ಹಿರಿಯ ನಾಗರಿಕರ ಹಕ್ಕುಗಳ ಸಂರಕ್ಷಣೆ.
- ಹಿರಿಯ ನಾಗರಿಕರಿಗೆ ಆರ್ಥಿಕ ಭದ್ರತೆ, ಆರೋಗ್ಯ ಸೌಲಭ್ಯಗಳು ಹಾಗೂ ಆಶ್ರವನ್ನು ಒದಗಿಸುವುದು.
- ಹಿರಿಯ ನಾಗರಿಕರನ್ನು ನಿಂದಿಸುವ ಮತ್ತು ಅವರನ್ನು ಅನುಚಿತವಾಗಿ ಉಪಯೋಗಿಸಿಕೊಳ್ಳುವುದರ ವಿರುದ್ಧ ರಕ್ಷಣೆ ಒದಗಿಸುವುದು.
- ಗ್ರಾಮಾಂತರ ಪ್ರದೇಶಗಳಲ್ಲಿ ವಾಸಿಸುತ್ತಿರುವ ವೃದ್ಧರಿಗೆ ನಗರ ಪ್ರದೇಶಗಳಲ್ಲಿರುವಂತೆ ಸಮಾನ ಅವಕಾಶಗಳನ್ನು ಒದಗಿಸಲು ಕಾರ್ಯಕ್ರಮಗಳನ್ನು ರೂಪಿಸುವುದು.
- ಹಿರಿಯ ನಾಗರಿಕರು ರಚನಾತ್ಮಕ, ಸುಭಿಕ್ಷ ಮತ್ತು ತೃಪ್ತಿಕರ ಜೀವನವನ್ನು ನಡೆಸಲು ಅವಕಾಶಗಳನ್ನು ನೀಡುವುದು.
- ಹಿರಿಯ ನಾಗರಿಕರೂ ಸಹ ಸಂಪನ್ಮೂಲ ವ್ಯಕ್ತಿಗಳಾಗಿದ್ದು ಕುಟುಂಬಕ್ಕೆ ಮತ್ತು ಸಮಾಜಕ್ಕೆ ಉಪಯುಕ್ತ ಸೇವೆಯನ್ನು ಸಲ್ಲಿಸಿರುತ್ತಾರೆ ಎಂಬುದನ್ನು ರಾಜ್ಯವು ಗುರುತಿಸುತ್ತದೆ.
- ಈ ನೀತಿಯು ವಯಸ್ಸಾದ ಹಿರಿಯರ ಕಲ್ಯಾಣಕ್ಕಾಗಿ ಆಯವ್ಯಯ ಹಂಚಿಕೆಯನ್ನು ಮಾಡುವ ಪ್ರಾಮುಖ್ಯತೆಯನ್ನು ಮನಗಂಡಿದೆ.

- ರಾಜ್ಯ ವೃದ್ಧಾಪ್ಯ ನೀತಿಯು ಹಿರಿಯರ ಆರೋಗ್ಯ ಕ್ಷೇಮಾಭಿವೃದ್ಧಿ, ಆರ್ಥಿಕ ಭದ್ರತೆ, ವಸತಿ ಮತ್ತು ಆಶ್ರಯ, ಆಸ್ತಿ ಮತ್ತು ಜೀವದ ರಕ್ಷಣೆ ತೆಗೆದುಕೊಳ್ಳಬೇಕಾದ ಇತರೆ ಕ್ಷೇತ್ರಗಳು ಮತ್ತು ಅನುಷ್ಠಾನ ಎಂಬ ಅನುಚ್ಛೇದಗಳನ್ನು ಹೊಂದಿದೆ. ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಕಾರ್ಯಪಡೆಯನ್ನು (ಟಾಸ್ಕ್ ಫೋರ್ಸ್‌ನ್ನು) ರಚಿಸಿದ್ದು, ಕಾರ್ಯಪಡೆಯು ರಾಜ್ಯ ನೀತಿಯ ಅನುಷ್ಠಾನದ ಮೇಲ್ವಿಚಾರಣೆಯನ್ನು ನಡೆಸುತ್ತಿದೆ.

ರಾಜ್ಯ ಸರ್ಕಾರವು ಹಿರಿಯ ನಾಗರಿಕರ ಶ್ರೇಯೋಭಿವೃದ್ಧಿಗಾಗಿ ಹಮ್ಮಿಕೊಂಡಿರುವ ಯೋಜನೆಗಳು

1. **ವೃದ್ಧಾಶ್ರಮಗಳು:**

ರಾಜ್ಯದ 30 ಜಿಲ್ಲೆಗಳಲ್ಲಿ 27 ವೃದ್ಧಾಶ್ರಮಗಳನ್ನು ನಡೆಸಲು ಸ್ವಯಂ ಸೇವಾ ಸಂಸ್ಥೆಗಳಿಗೆ ಅನುದಾನವನ್ನು ನೀಡಲಾಗುತ್ತಿದೆ ಹಾಗೂ 2018-19ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಣೆಯಾಗಿರುವಂತೆ 52 ಕಂದಾಯ ಉಪ ವಿಭಾಗಗಳಿಗೆ ವೃದ್ಧಾಶ್ರಮಗಳನ್ನು ಹೆಚ್ಚಿಸಿ ಘೋಷಿಸಲಾಗಿರುತ್ತದೆ. ಈ ಯೋಜನೆಯಡಿಯಲ್ಲಿ 25 ವೃದ್ಧರು ಇರುವ ಒಂದು ಘಟಕಕ್ಕೆ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳಿಗಾಗಿ ಒಟ್ಟು ವಾರ್ಷಿಕ ರೂ.8.00ಲಕ್ಷಗಳ ಅನುದಾನವನ್ನು ಜಿಲ್ಲಾ ಪಂಚಾಯತ್, ಮೂಲಕ ನೀಡಲಾಗುತ್ತದೆ. ಯೋಜನಾ ವೆಚ್ಚದ ಶೇ.90ರಷ್ಟು ಅನುದಾನವನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಲಾಗುತ್ತಿದ್ದು ಉಳಿದ ಶೇ.10ರಷ್ಟನ್ನು ಸಂಸ್ಥೆಯು ಭರಿಸಬೇಕಾಗುತ್ತದೆ. ಅನಾಥ ನಿರ್ಗತಿಕ ಹಾಗೂ ಬಡತನ ರೇಖೆಗಿಂತ ಕೆಳಗಿರುವ ವೃದ್ಧರು ಈ ಸೌಲಭ್ಯವನ್ನು ಪಡೆಯಬಹುದಾಗಿರುತ್ತದೆ.

2. **ಹಿರಿಯ ನಾಗರಿಕರಿಗೆ ಸಹಾಯವಾಣಿ ಕೇಂದ್ರಗಳು:** (ಶುಲ್ಕ ರಹಿತ ದೂರವಾಣಿ ಸಂಖ್ಯೆ:1090)

ಹಿರಿಯ ನಾಗರಿಕರು ಕಿರುಕುಳ, ಹಣಕಾಸಿನ ಶೋಷಣೆ, ಮಾನಸಿಕ ತುಮುಲ ಮತ್ತು ದುರ್ಬಲರಾಗಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇಂತಹ ಸಮಸ್ಯೆಗಳ ನಿವಾರಣೆಗಾಗಿ ಹಾಗೂ ತುರ್ತು ಸಹಾಯಕ್ಕಾಗಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ, ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಿಂದ ದಿನದ 24 ಗಂಟೆ ನಡೆಸಲಾಗುತ್ತಿದೆ. ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ನಡೆಸುವ ಸ್ವಯಂ ಸೇವಾ ಸಂಸ್ಥೆಗಳಿಗೆ ಆವರ್ತಕ ಹಾಗೂ ಅನಾವರ್ತಕ ವೆಚ್ಚಗಳು ಸೇರಿ ವಾರ್ಷಿಕ ರೂ.7.15ಲಕ್ಷಗಳ ಅನುದಾನವನ್ನು ನೀಡಲಾಗುತ್ತಿದೆ. 2016-17ನೇ ಸಾಲಿನಿಂದ ಆನ್‌ಲೈನ್ ಮೂಲಕ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮ ವಹಿಸಲಾಗಿದೆ.

3. **ಹಗಲು ಯೋಗಕ್ಷೇಮ ಕೇಂದ್ರಗಳು:**

ರಾಜ್ಯದ ಉಡುಪಿ, ರಾಮನಗರ, ಬೀದರ್, ತುಮಕೂರು, ಕೋಲಾರ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ 24 ಜಿಲ್ಲೆಗಳಲ್ಲಿ ಪ್ರತಿ ಜಿಲ್ಲೆಗೆ ಒಂದರಂತೆ 25 ಹಗಲು ಯೋಗಕ್ಷೇಮ ಕೇಂದ್ರಗಳನ್ನು (ಬೆಂಗಳೂರಿನಲ್ಲಿ 2) ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ. ಪ್ರತಿ ಕೇಂದ್ರದಲ್ಲಿ 50 ರಿಂದ 150 ವಯೋವೃದ್ಧರಿಗೆ ಅವಕಾಶ ಕಲ್ಪಿಸಿಕೊಡಲಾಗಿದೆ. ಸದರಿ ಯೋಜನೆಗೆ ವಾರ್ಷಿಕ ರೂ.11.20 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗುತ್ತಿದೆ. ಈ ಹಗಲು ಯೋಗಕ್ಷೇಮ ಕೇಂದ್ರಗಳ ಮಂಜೂರಾತಿಗೆ 2016-17ನೇ ಸಾಲಿನಿಂದ ಆನ್‌ಲೈನ್ ಮೂಲಕ ಪ್ರಸ್ತಾವನೆ ಸಲ್ಲಿಸಲು ಕ್ರಮವಹಿಸಲಾಗಿದೆ.

4. **ಹಿರಿಯ ನಾಗರಿಕರಿಗೆ ಸಾಧನ ಸಲಕರಣೆ ವಿತರಣೆ ಯೋಜನೆ:**

2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಬಡತನ ರೇಖೆಗಿಂತ ಕೆಳಗಿರುವ 20000 ಹಿರಿಯ ನಾಗರಿಕರಿಗೆ ಸಾಧನ ಸಲಕರಣೆ ವಿತರಣೆ ಯೋಜನೆಯನ್ನು ಘೋಷಣೆ ಮಾಡಲಾಗಿರುತ್ತದೆ. ಈ ಯೋಜನೆಯಡಿ ಹಿರಿಯ ನಾಗರಿಕರಿಗೆ ಅವಶ್ಯಕತೆಗನುಸಾರವಾಗಿ ಕನ್ನಡಕ, ಬೇಕಾದ ಅಳತೆಗೆ ತಕ್ಕಂತೆ ಮಾರ್ಪಾಡು ಮಾಡಬಹುದಾದ ಊರುಗೋಲು, ಟ್ರೈಪಾಡ್, ಶ್ರವಣ ಸಾಧನ, ವಾಕರ್ ಮತ್ತು ಕಮೋಡ್‌ಗಳನ್ನು ಇ-ಟೆಂಡರ್ ಮೂಲಕ ಆಯ್ಕೆಯಾದ ಅಥವಾ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರಕ್ಕೆ ಒಳಪಟ್ಟ ಸಂಸ್ಥೆಗಳಿಂದ ಖರೀದಿಸಿ ವಿತರಿಸುವ ಯೋಜನೆಯಾಗಿರುತ್ತದೆ.
(**ಸಂಪರ್ಕಿಸಬೇಕಾದವರು:** ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು)

..9

5. <u>ಹಿರಿಯ ನಾಗರಿಕರಿಗೆ ಗುರುತಿನ ಚೀಟಿಗಳು :</u>

60 ವರ್ಷ ಮೇಲ್ಪಟ್ಟ ವಯೋಮಾನದ ಎಲ್ಲಾ ಹಿರಿಯ ನಾಗರಿಕರಿಗೆ ವಿದ್ಯುನ್ಮಾನ ನಾಗರಿಕ ಸೇವಾ ವಿತರಣಾ ನಿರ್ದೇಶನಾಲಯ, ಇ-ಆಡಳಿತ ಇಲಾಖೆಯ ಸೇವಾ ಸಿಂಧು ಯೋಜನೆಯಡಿ ಆನ್-ಲೈನ್ ತಂತ್ರಾಂಶವನ್ನು ಅಭಿವೃದ್ಧಿಪಡಿಸಿದ್ದು, ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಗುರುತಿನ ಚೀಟಿಗಳನ್ನು ಆನ್-ಲೈನ್ ವಿತರಿಸಲಾಗುತ್ತಿದೆ.

6. <u>ವೃದ್ಧಾಪ್ಯ ವೇತನ:</u>

- <u>ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ:</u>

ಈ ಯೋಜನೆಯಡಿ 60 ರಿಂದ 79 ವರ್ಷದೊಳಗಿನ ವೃದ್ಧರಿಗೆ ಮಾಹೆಯಾನ ಕೇಂದ್ರ ಸರ್ಕಾರದಿಂದ ರೂ.200/- (ರೂ.ಎರಡು ನೂರು ಮಾತ್ರ)ಗಳನ್ನು ನೀಡುತ್ತಿದೆ. ಇದರ ಜೊತೆಗೆ ರಾಜ್ಯ ಸರ್ಕಾರವು ತನ್ನ ವಂತಿಗೆ ರೂ.300/-(ರೂ. ಮುನ್ನೂರು ಮಾತ್ರ) ಸೇರಿಸಿ, ಒಟ್ಟು ರೂ. 500/- (ರೂ. ಐನೂರುಗಳು ಮಾತ್ರ)ಗಳ ಪಿಂಚಣಿಯನ್ನು ನೀಡಲಾಗುತ್ತಿದೆ.

80 ವರ್ಷ ಮೇಲ್ಪಟ್ಟ ವೃದ್ಧರಿಗೆ ಕೇಂದ್ರ ಸರ್ಕಾರವು ರೂ.500/- (ರೂ.ಐನೂರು ಮಾತ್ರ) ಮತ್ತು ರಾಜ್ಯ ಸರ್ಕಾರದ ಪಾಲು ರೂ.250/- (ರೂ. ಇನ್ನೂರ ಐವತ್ತು ಮಾತ್ರ) ಒಟ್ಟು ರೂ.750/- (ರೂ.ಏಳುನೂರ ಐವತ್ತುಗಳು ಮಾತ್ರ)ಗಳ ಪಿಂಚಣಿಯನ್ನು ಆಯಾ ತಾಲ್ಲೂಕಿನ ಕಂದಾಯ ಇಲಾಖೆಯ ತಹಶೀಲ್ದಾರರ ಕಛೇರಿ ವತಿಯಿಂದ ನೀಡಲಾಗುತ್ತಿದೆ.

- <u>ಸಂಧ್ಯಾ ಸುರಕ್ಷ ಯೋಜನೆ:</u>

ಈ ಯೋಜನೆಯಡಿ ಸಾಮಾಜಿಕ ಭದ್ರತಾ ರೂಪದಲ್ಲಿ 65 ವರ್ಷ ಮೇಲ್ಪಟ್ಟ ವೃದ್ಧರಿಗೆ ರಾಜ್ಯ ಸರ್ಕಾರದಿಂದ ಮಾಹೆಯಾನ ರೂ.500/-(ರೂ. ಐನೂರು ಮಾತ್ರ)ಗಳ ಪಿಂಚಣಿಯನ್ನು ನೀಡಲಾಗುತ್ತಿದೆ.

<u>ಅರ್ಹತೆಗಳು:</u>

1. 65 ವರ್ಷಕ್ಕಿಂತ ಮೇಲ್ಪಟ್ಟಿರಬೇಕು.
2. ಸ್ಥಳೀಯ ಕಂದಾಯ ಅಧಿಕಾರಿಗಳ ದೃಢೀಕರಣದಂತೆ ಮನವಿದಾರರ ಮತ್ತು ಅವರ ಪತಿ ಅಥವಾ ಪತ್ನಿಯರ ವಾರ್ಷಿಕ ಆದಾಯವು ರೂ.20,000/-ಕ್ಕಿಂತ ಹೆಚ್ಚಾಗಿರಬಾರದು.
3. ಮಕ್ಕಳ ಆದಾಯವು ತಂದೆ ತಾಯಿಯರ ವಾರ್ಷಿಕ ಆದಾಯಕ್ಕೆ ಪರಿಗಣಿಸಲ್ಪಡುವುದಿಲ್ಲ.
4. ಪತಿ ಅಥವಾ ಪತ್ನಿಯ ಜಂಟಿ ಖಾತೆಯಲ್ಲಿ ರೂ.10,000/-ಕ್ಕಿಂತ ಹೆಚ್ಚಿನ ಠೇವಣಿ ಇರಬಾರದು.
5. ಯಾವುದೇ ರೀತಿಯ ಇತರ ಮಾಸಾಶನ/ಪಿಂಚಣಿಯನ್ನು ಪಡೆಯುತ್ತಿರುವವರು ಈ ವೇತನಕ್ಕೆ ಅರ್ಹರಾಗಿರುವುದಿಲ್ಲ.
6. ಈ ಕೆಳಗಿನ ವಲಯಗಳಲ್ಲಿ ಇರುವ ಅಭ್ಯರ್ಥಿಗಳು ಈ ಯೋಜನೆಯಡಿ ಸೌಲಭ್ಯ ಪಡೆಯಬಹುದಾಗಿದೆ.

ಅತಿ ಸಣ್ಣ ರೈತರು, ಸಣ್ಣ ರೈತರು, ಕೃಷಿ ಕಾರ್ಮಿಕರು, ಮೀನುಗಾರರು, ಅಸಂಘಟಿತ ವಲಯಗಳಲ್ಲಿ ಕೆಲಸ ಮಾಡುವ ಕೂಲಿ ಕಾರ್ಮಿಕರು ಆದರೆ ಕಟ್ಟಡ ಕಾಮಗಾರಿಗಳಲ್ಲಿ ಕೆಲಸ ಮಾಡುವ ಕಾರ್ಮಿಕರೆಂದರೆ Regulation of Employment and conditions of services Act 1996 ಇದರ ಪ್ರಕಾರ ಅರ್ಹರಿರುವುದಿಲ್ಲ. ಈ ಯೋಜನೆಯಡಿಯಲ್ಲಿ ಸೌಲಭ್ಯ ಪಡೆಯಲು ಸಂಬಂಧಪಟ್ಟ ತಾಲ್ಲೂಕಿನ ತಹಶೀಲ್ದಾರರನ್ನು ಸಂಪರ್ಕಿಸಬಹುದು.

7. <u>ಹಿರಿಯ ನಾಗರಿಕರಿಗೆ ಬಸ್ ಪ್ರಯಾಣ ದರದಲ್ಲಿ ರಿಯಾಯಿತಿ ಯೋಜನೆ:</u>

ರಾಜ್ಯ ಸಾರಿಗೆ ಹಾಗೂ ನಗರ ಸಾರಿಗೆ ಬಸ್‌ಗಳಲ್ಲಿ 60 ವರ್ಷ ಹಾಗೂ ಅದಕ್ಕಿಂತ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರಿಗೆ ಬಸ್ ಪ್ರಯಾಣ ದರದಲ್ಲಿ ಶೇ.25ರಷ್ಟು ರಿಯಾಯಿತಿಯನ್ನು ನೀಡಲಾಗುತ್ತಿದೆ. ಈ ಯೋಜನೆಯ ಪ್ರಯೋಜನ ಪಡೆಯಲು ಹಿರಿಯ ನಾಗರಿಕರು ಇಲಾಖೆ ವತಿಯಿಂದ

ನೀಡಲಾಗುವ ಗುರುತಿನ ಚೀಟಿ, ಚುನಾವಣಾ ಗುರುತಿನ ಚೀಟಿ, ಚಾಲನಾ ಪರವಾನಗಿ ಇವುಗಳಲ್ಲಿ ಯಾವುದಾದರೊಂದನ್ನು ಇಲ್ಲವೆ ಕೆ.ಎಸ್.ಆರ್.ಟಿ.ಸಿ.ಯಿಂದ ವಿತರಿಸಲಾದ ಗುರುತಿನ ಚೀಟಿ ಇವುಗಳನ್ನು ತೋರಿಸಬೇಕಾಗುತ್ತದೆ.

8. ಜೀರಿಯಾಟ್ರಿಕ್ ಕೇಂದ್ರಗಳು:

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮೂಲಕ ರಾಜ್ಯ ಯೋಜನೆಯಡಿ ಕೋಲಾರ, ತುಮಕೂರು, ಬಿಜಾಪುರ, ಕೊಡಗು, ಚಿಕ್ಕಮಗಳೂರು ಮತ್ತು ಧಾರವಾಡ ಜಿಲ್ಲೆಗಳ ಸರ್ಕಾರಿ ಆಸ್ಪತ್ರೆಗಳಲ್ಲಿ ಹಿರಿಯ ನಾಗರಿಕರಿಗಾಗಿ ಪ್ರತ್ಯೇಕ ಜೀರಿಯಾಟ್ರಿಕ್ ವಾರ್ಡ್‌ಗಳನ್ನು ಸ್ಥಾಪಿಸಲಾಗಿದೆ. ಈ ಕೇಂದ್ರಗಳಲ್ಲಿ ಉಚಿತವಾಗಿ ಆರೋಗ್ಯ ಸೌಲಭ್ಯಗಳನ್ನು ನೀಡಲಾಗುತ್ತಿದೆ.

ಕೇಂದ್ರ ಸರ್ಕಾರದ ಯೋಜನೆಗಳು

1. ವೃದ್ಧಾಶ್ರಮಗಳು:

ಕೇಂದ್ರ ಅನುದಾನ ಯೋಜನೆಯಡಿ ರಾಜ್ಯದಲ್ಲಿ 41 ವೃದ್ಧಾಶ್ರಮಗಳಿಗೆ ಅನುದಾನವನ್ನು ಮಂಜೂರು ಮಾಡುತ್ತಿದ್ದು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಈ ವೃದ್ಧಾಶ್ರಮಗಳನ್ನು ನಡೆಸಲಾಗುತ್ತಿದೆ.

2. ಸಂಚಾರಿ ಆರೋಗ್ಯ ಘಟಕಗಳು:

ಸ್ವಯಂ ಸೇವಾ ಸಂಸ್ಥೆಗಳು ಸಂಚಾರಿ ಆರೋಗ್ಯ ಘಟಕಗಳನ್ನು ನಡೆಸಲು ಮುಂದೆ ಬಂದಲ್ಲಿ ಕೇಂದ್ರ ಸರ್ಕಾರವು ಅನುದಾನ ನೀಡುವುದು. ರಾಜ್ಯದ ಕೋಲಾರ ಜಿಲ್ಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಯ ಮೂಲಕ ಸಂಚಾರಿ ಆರೋಗ್ಯ ಘಟಕ ನಡೆಸಲಾಗುತ್ತಿದೆ.

3. ಡಿಮೆನ್ಷಿಯಾ ಹಗಲು ಯೋಗಕ್ಷೇಮ ಕೇಂದ್ರ:

ಮರೆಗುಳಿತನದಿಂದ ಬಳಲುತ್ತಿರುವ ಹಿರಿಯ ನಾಗರಿಕರಿಗೆ ಚಿಕಿತ್ಸಾ ಸೌಲಭ್ಯ ನೀಡಲು ಕೇಂದ್ರ ಸರ್ಕಾರದ ವತಿಯಿಮದ ಡಿಮೆನ್ಷಿಯಾ ಹಗಲು ಯೋಗಕ್ಷೇಮ ಕೇಂದ್ರವನ್ನು ನಡೆಸುತ್ತಿದ್ದು, ದಾವಣಗೆರೆಯಲ್ಲಿ ಸ್ವಯಂ ಸೇವಾ ಸಂಸ್ಥೆಯ ಮೂಲಕ ಒಂದು ಕೇಂದ್ರ ನಡೆಯುತ್ತಿದೆ.

4. ಪ್ರಾಂತೀಯ ಸಂಪನ್ಮೂಲ ಮತ್ತು ತರಬೇತಿ ಕೇಂದ್ರ:

ನೈಟಿಂಗೇಲ್ ಮೆಟಿಕಲ್ ಟ್ರಸ್ಟ್ (ರಿ), ಬೆಂಗಳೂರು ಸಂಸ್ಥೆಯ ವತಿಯಿಂದ ದಕ್ಷಿಣ ಭಾರತದ ರಾಜ್ಯಗಳಾದ ಕರ್ನಾಟಕ, ತಮಿಳುನಾಡು, ಆಂಧ್ರಪ್ರದೇಶ, ಕೇರಳ ರಾಜ್ಯಗಳಲ್ಲಿ ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಿಬ್ಬಂದಿಗಳಿಗೆ ತರಬೇತಿಯನ್ನು ಆಯೋಜಿಸಲಾಗುತ್ತಿದೆ.

5. ರಾಷ್ಟ್ರೀಯ ವಯೋಶ್ರೀ ಯೋಜನೆ:

ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಮೂಲಕ ಈ ಯೋಜನೆಯು 2017ರಲ್ಲಿ ಅನುಷ್ಠಾನಗೊಳಿಸಲಾಗಿದೆ. ಈ ಯೋಜನೆಯಡಿ ಬಡತನ ರೇಖೆಗಿಂತ ಕೆಳಗಿರುವ ಹಿರಿಯ ನಾಗರಿಕರಿಗೆ ಹಾಗೂ ವೃದ್ಧಾಪ್ಯಕ್ಕೆ ಸಂಬಂಧಿಸಿದ ಅಂಗವಿಕಲತೆ, ದೃಷ್ಟಿಮಾಂದ್ಯ, ಶ್ರವಣದೋಷ, ದಂತಗಳ ಉದುರುವಿಕೆ ಮತ್ತು ಚಲನ ವೈಕಲ್ಯತೆ ಹೊಂದಿರುವವರಿಗೆ ಸದ್ಯದಲ್ಲಿ ಬೆಂಗಳೂರು ಹಾಗೂ ಧಾರವಾಡ ಜಿಲ್ಲೆಗಳಲ್ಲಿ ಶಿಬಿರಗಳನ್ನು ಏರ್ಪಡಿಸಿ ವೃದ್ಧರಿಗೆ ಅವಶ್ಯವಿರುವ ಸಾಧನ ಸಲಕರಣಗಳನ್ನು ಅಂದಾಜು ಮಾಡಿ ಕೇಂದ್ರ ಸರ್ಕಾರದಡಿ ಸಾರ್ವಜನಿಕ ಉದ್ದಿಮೆಯಾಗಿ ಕಾರ್ಯನಿರ್ವಹಿಸುತ್ತಿರುವ ಭಾರತೀಯ ಕೃತಕ ಅಂಗಾಂಗಳ ಉತ್ಪಾದನಾ ನಿಗಮ(ಅಲಿಂಕೋ) ಸಂಸ್ಥೆಯ ವತಿಯಿಂದ ಉಚಿತವಾಗಿ ವಿತರಿಸಲಾಗುವುದು.

6. <u>ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯ್ದೆ 2007</u>

ಕೇಂದ್ರ ಸರ್ಕಾರವು ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯ್ದೆ 2007ನ್ನು ಜಾರಿಗೊಳಿಸಿದ್ದು, ಇದನ್ನು ದಿನಾಂಕ:01–04–2008ರಿಂದ ರಾಜ್ಯ ಸರ್ಕಾರದಲ್ಲಿ ಜಾರಿಗೊಳಿಸಿ ಅಧಿಸೂಚನೆಯನ್ನು ಹೊರಡಿಸಲಾಗಿದೆ. ಸದರಿ ಕಾಯ್ದೆಯ ಪರಿಚ್ಛೇದ 7ರ ಉಪನಿಯಮ (1)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಪ್ರತಿ ಕಂದಾಯ ಉಪವಿಭಾಗದಲ್ಲಿ ಒಂದು ನ್ಯಾಯಮಂಡಳಿಯನ್ನು ಸ್ಥಾಪಿಸಲಾಗಿದೆ ಹಾಗೂ ಸದರಿ ಕಾಯ್ದೆಯ ಪರಿಚ್ಛೇದ 7ರ ಉಪನಿಯಮ (2)ರನ್ವಯ ನಿರ್ವಹಣಾ ಮಂಡಳಿಯ ಅಧ್ಯಕ್ಷರನ್ನಾಗಿ ಆಯಾ ಕಂದಾಯ ಉಪವಿಭಾಗದ ಸಹಾಯಕ ಆಯುಕ್ತರನ್ನು (ಉಪ ವಿಭಾಗಾಧಿಕಾರಿರವರನ್ನು) ನೇಮಕ ಮಾಡಲಾಗಿದೆ.

ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯಿದೆ 2007(ಕೇಂದ್ರ ಶಾಸನ 2007ರ ನಿಯಮ–56) ಪರಿಚ್ಛೇದ 7ರನ್ವಯ ಸ್ಥಾಪಿಸಿರುವ ನಿರ್ವಹಣಾ ನ್ಯಾಯಮಂಡಳಿಯ ತೀರ್ಪಿನ ವಿರುದ್ಧ ಮೇಲ್ಮನವಿಯನ್ನು ಅಂಗೀಕರಿಸಲು ನಿಯಮ 15ರ ಉಪನಿಯಮ(1)ರ ಮೇರೆಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಪ್ರತಿ ಜಿಲ್ಲೆಗೆ ಒಂದರಂತೆ "ಮೇಲ್ಮನವಿ ನ್ಯಾಯಮಂಡಳಿ"ಯನ್ನು ಹಾಗೂ ಸದರಿ ಕಾಯ್ದೆಯ ಸೆಕ್ಷನ್ 15 ಉಪನಿಯಮ 2ರನ್ವಯ ಮೇಲ್ಮನವಿ ನ್ಯಾಯಮಂಡಳಿಯ" ಅಧ್ಯಕ್ಷರನ್ನಾಗಿ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯ್ದೆ 2007(ಕೇಂದ್ರ ಶಾಸನ 2007ರ ನಿಯಮ–56)ರ ಕಾಯ್ದೆಯ ಪರಿಚ್ಛೇದ 18(1)ರನ್ವಯ ಆಯಾ ಜಿಲ್ಲೆಯ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರನ್ನು ನಿರ್ವಹಣಾಧಿಕಾರಿಗಳೆಂದು ಪದನಾಮಗೊಳಿಸಿ ಸರ್ಕಾರವು ದಿ: 13–09–2010ರಂದು ಆದೇಶಿಸಿದೆ.

ಸದರಿ ಕಾಯ್ದೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ರಾಜ್ಯ ಪರಿಷತ್ ಹಾಗೂ ಜಿಲ್ಲಾ ಮಟ್ಟದ ಸಮಿತಿಯನ್ನು ರಚಿಸಿ ದಿ:22–08–2011ರಂದು ಅಧಿಸೂಚನೆ ಹೊರಡಿಸಲಾಗಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ:ಮಮಇ/11/ಪಿಹೆಚ್‌ಪಿ/2012 ದಿನಾಂಕ:23–09–2013ರಲ್ಲಿ ಸರ್ಕಾರೇತರ ಸದಸ್ಯರನ್ನು ಸೇರಿದಂತೆ ರಾಜ್ಯ ಪರಿಷತ್‌ನ ಸದಸ್ಯರನ್ನು ನೇಮಕ ಮಾಡಲಾಗಿರುತ್ತದೆ. ಮಾನ್ಯ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ಸಭೆಗಳನ್ನು ನಡೆಸಲಾಗಿರುತ್ತದೆ.

*****

	ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪಿ. ಆರ್. ರಮೇಶ್ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ:1665ಕ್ಕೆ ಅನುಬಂಧ-2							
	2019-20ನೇ ಸಾಲಿನಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳ ಸೌಲಭ್ಯವನ್ನು ಪಡೆದಿರುವ ಜಿಲ್ಲಾವಾರು ಫಲಾನುಭವಿಗಳ ವಿವರ							

ಕ್ರ.ಸಂ	ಜಿಲ್ಲೆಯ ಹೆಸರು	1 ವಿಕಲಚೇತನರಿಗೆ ವಿದ್ಯಾರ್ಥಿವೇತನ ಯೋಜನೆ	2 ಮಹಿಳಾ ವಿಕಲಚೇತನರ ವಸತಿ ನಿಲಯ	3 ಸಾಧನ ಸಲಕರಣೆಗಳು	4 ಸಾಧನೆ ಪ್ರತಿಭೆ	5 ಗ್ರಾಮೀಣ ಪುನರ್ವಸತಿ ಕೇಂದ್ರ	6 ಮರಣ ಪರಿಹಾರ ನಿಧಿ	7 ನಿರುದ್ಯೋಗ ಭತ್ಯೆ	8 ಆಧಾರ
1	ಬೆಂಗಳೂರು (ನ)	546	30	0	21	20	0	0	0
2	ಬೆಂಗಳೂರು (ಗ್ರಾ)	128	40	0	0	90	0	0	0
3	ಬೆಳಗಾವಿ	759	25	221	0	349	0	2	7
4	ಬಳ್ಳಾರಿ	204	25	0	0	196	0	0	0
5	ಬೀದರ್	131	34	88	0	158	2	0	0
6	ವಿಜಯಪುರ	940	19	0	4	192	2	0	19
7	ಬಾಗಲಕೋಟೆ	225	22	130	1	150	0	2	0
8	ಚಿತ್ರದುರ್ಗ	307	36	0	0	175	0	0	0
9	ಚಿಕ್ಕಮಗಳೂರು	188	0	0	0	166	0	0	0
10	ಚಾಮರಾಜನಗರ	373	39	25	0	124	0	0	0
11	ಧಾರವಾಡ	969	50	206	2	129	0	0	0
12	ದಕ್ಷಿಣಕನ್ನಡ	868	0	24	0	108	0	0	0
13	ದಾವಣಗೆರೆ	654	0	159	0	191	2	2	28
14	ಕಲಬುರಗಿ	501	50	0	0	293	0	0	0
15	ಗದಗ	847	20	0	0	125	0	0	9
16	ಹಾಸನ	570	50	0	8	245	0	2	7
17	ಹಾವೇರಿ	1113	50	378	209	209	0	1	0
18	ಕೊಡಗು	96	0	42	2	56	0	0	2
19	ಕೋಲಾರ	453	50	0	0	131	0	0	0
20	ಕೊಪ್ಪಳ	547	35	32	0	129	0	0	6
21	ಮೈಸೂರು	1496	50	0	0	266	0	0	0
22	ಮಂಡ್ಯ	302	23	235	3	190	0	0	0
23	ರಾಯಚೂರು	400	0	157	1	170	0	0	17
24	ಶಿವಮೊಗ್ಗ	566	0	527	0	1.15	1	2	0
25	ತುಮಕೂರು	841	25	101	0	0	0	2	26
26	ಉತ್ತರಕನ್ನಡ	525	0	0	4	199	2	8	5
27	ಉಡುಪಿ	180	0	0	0	82	0	0	4
28	ರಾಮನಗರ	226	23	0	3	82	0	0	0
29	ಚಿಕ್ಕಬಳ್ಳಾಪುರ	210	41	180	2	115	0	0	0
30	ಯಾದಗಿರಿ	86	25	0	0	123	0	0	0
ಒಟ್ಟು		15251	762	2505	260	4464	9	21	130

	2019-20ನೇ ಸಾಲಿನಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳ ಸೌಲಭ್ಯವನ್ನು ಪಡೆದಿರುವ ಜಿಲ್ಲಾವಾರು ಫಲಾನುಭವಿಗಳ ವಿವರ							
		9	10	11	12	13	14	15
ಕ್ರ.ಸಂ	ಜಿಲ್ಲೆಯ ಹೆಸರು	ವೈದ್ಯಕೀಯ ಪರಿಹಾರ ನಿಧಿ	ಶುಲ್ಕ ಮರುಪಾವತಿ ಯೋಜನೆ	ವಿವಾಹ ಪ್ರೋತ್ಸಾಹ ಧನ	ಶಿಶುಪಾಲನಾ ಭತ್ಯೆ	ನಿರಾಮಯ	ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ	ವಿಕಲಚೇತನರ ಸಹಾಯವಾಣಿ
1	ಬೆಂಗಳೂರು (ನ)	5	120	10	7	0	2	3
2	ಬೆಂಗಳೂರು (ಗ್ರಾ)	2	21	14	3	0	0	4
3	ಬೆಳಗಾವಿ	0	46	16	0	0	0	4
4	ಬಳ್ಳಾರಿ	0	12	14	2	0	1	4
5	ಬೀದರ್	0	37	17	1	0	1	4
6	ವಿಜಯಪುರ	3	80	31	0	0	19	3
7	ಬಾಗಲಕೋಟೆ	2	18	13	1	20	0	4
8	ಚಿತ್ರದುರ್ಗ	0	34	20	2	0	0	4
9	ಚಿಕ್ಕಮಗಳೂರು	0	48	18	0	0	7	4
10	ಚಾಮರಾಜನಗರ	0	37	19	7	0	0	4
11	ಧಾರವಾಡ	0	156	19	0	0	0	4
12	ದಕ್ಷಿಣಕನ್ನಡ	0	42	30	0	0	0	4
13	ದಾವಣಗೆರೆ	0	46	17	1	0	0	4
14	ಕಲಬುರಗಿ	10	88	53	7	0	0	4
15	ಗದಗ	0	59	23	5	0	0	4
16	ಹಾಸನ	3	68	14	6	0	44	4
17	ಹಾವೇರಿ	0	166	30	7	0	7	4
18	ಕೊಡಗು	0	14	4	0	0	0	4
19	ಕೋಲಾರ	3	15	10	4	0	0	4
20	ಕೊಪ್ಪಳ	0	24	14	4	0	0	3
21	ಮೈಸೂರು	0	260	19	11	0	9	4
22	ಮಂಡ್ಯ	0	21	13	7	0	0	4
23	ರಾಯಚೂರು	0	135	42	3	16	0	4
24	ಶಿವಮೊಗ್ಗ	4	49	40	3	0	0	3
25	ತುಮಕೂರು	1	26	31	4	0	0	4
26	ಉತ್ತರಕನ್ನಡ	0	45	21	2	0	0	4
27	ಉಡುಪಿ	2	25	5	2	0	7	3
28	ರಾಮನಗರ	0	16	11	4	60	0	4
29	ಚಿಕ್ಕಬಳ್ಳಾಪುರ	0	34	10	3	0	0	4
30	ಯಾದಗಿರಿ	0	99	12	0	0	0	4
ಒಟ್ಟು		35	1841	590	96	96	97	115

		2019-20ನೇ ಸಾಲಿನಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳ ಸೌಲಭ್ಯವನ್ನು ಪಡೆದಿರುವ ಜಿಲ್ಲಾವಾರು ಫಲಾನುಭವಿಗಳ ವಿವರ				
		16	17	18	19	20
ಕ್ರ.ಸಂ	ಜಿಲ್ಲೆಯ ಹೆಸರು	ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ	ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರ	ಶಿಶುಕೇಂದ್ರೀಕೃತ ಯೋಜನೆ	ವೃದ್ಧಾಶ್ರಮ	1982 ರಾಜ್ಯ ಅನುದಾನ ಸಂಹಿತೆ
1	ಬೆಂಗಳೂರು (ನ)	0	90	1403	0	171
2	ಬೆಂಗಳೂರು (ಗ್ರಾ)	4	50	109	0	0
3	ಬೆಳಗಾವಿ	0	50	473	25	180
4	ಬಳ್ಳಾರಿ	1	1	172	25	0
5	ಬೀದರ್	4	0	443	25	0
6	ವಿಜಯಪುರ	7	7	198	25	32
7	ಬಾಗಲಕೋಟೆ	4	70	489	0	0
8	ಚಿತ್ರದುರ್ಗ	5	9	164	0	1
9	ಚಿಕ್ಕಮಗಳೂರು	5	54	172	32	16
10	ಚಾಮರಾಜನಗರ	4	49	0	0	0
11	ಧಾರವಾಡ	0	50	522	25	15
12	ದಕ್ಷಿಣಕನ್ನಡ	5	0	447	0	0
13	ದಾವಣಗೆರೆ	0	0	529	0	0
14	ಕಲಬುರಗಿ	0	50	165	0	0
15	ಗದಗ	0	0	363	0	0
16	ಹಾಸನ	0	50	131	25	10
17	ಹಾವೇರಿ	0	50	590	25	12
18	ಕೊಡಗು	5	50	62	25	0
19	ಕೋಲಾರ	6	0	260	0	0
20	ಕೊಪ್ಪಳ	4	50	64	24	46
21	ಮೈಸೂರು	4	50	462	25	25
22	ಮಂಡ್ಯ	5	50	427	0	25
23	ರಾಯಚೂರು	5	50	129	0	0
24	ಶಿವಮೊಗ್ಗ	5	0	0	25	275
25	ತುಮಕೂರು	4	0	195	25	212
26	ಉತ್ತರಕನ್ನಡ	5	4	470	0	0
27	ಉಡುಪಿ	4	0	375	0	4
28	ರಾಮನಗರ	4	0	194	25	0
29	ಚಿಕ್ಕಬಳ್ಳಾಪುರ	4	50	75	25	0
30	ಯಾದಗಿರಿ	4	92	0	25	0
ಒಟ್ಟು		98	976	9083	406	1024